<u>ಕರ್ನಾಟಕ ಸರ್ಕಾರ</u>

ಸಂಖ್ಯೆ:ಆಇ 10 ಟಿಎಫ್‌ಪಿ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ

ಬೆಂಗಳೂರು,ದಿನಾಂಕ: 24-08-2023.
8

<u>ಸುತ್ತೋಲೆ</u>

ವಿಷಯ:- ಸಚಿವ ಸಂಪುಟದ ಅನುಮೋದನೆ ಪಡೆಯಲು ಆರ್ಥಿಕ ಇಲಾಖೆಗೆ ಕಡತಗಳನ್ನು ಕಳುಹಿಸುವ ಬಗ್ಗೆ ಸೂಚನೆಗಳನ್ನು ನೀಡುವ ಕುರಿತು.

*******

ಕರ್ನಾಟಕ ಸರ್ಕಾರಿ (ವ್ಯವಹಾರಗಳ ನಿರ್ವಹಣೆ) ನಿಯಮಗಳು 1977ರ ನಿಯಮ 17ರನ್ವಯ ಯಾವುದೇ ಆರ್ಥಿಕ ಪರಿಣಾಮಗಳು ಇರುವ ಪ್ರಸ್ತಾವನೆಗಳನ್ನು ಸಚಿವ ಸಂಪುಟದ ಅನುಮೋದನೆಗೆ ಸಲ್ಲಿಸುವ ಮೊದಲು ಆರ್ಥಿಕ ಇಲಾಖೆಯ ಸಹಮತಿ ಪಡೆಯಬೇಕಾಗಿರುತ್ತದೆ.

ಈ ರೀತಿ ಆಡಳಿತ ಇಲಾಖೆಗಳಿಂದ ಆರ್ಥಿಕ ಇಲಾಖೆಗೆ ಸಲ್ಲಿಸಲಾಗುವ ಪ್ರಸ್ತಾವನೆಗಳ್ಳನ್ನು ಆರ್ಥಿಕ ಇಲಾಖೆಯು ಕೂಲಂಕುಷವಾಗಿ ಪರಿಶೀಲಿಸಬೇಕಾಗುತ್ತದೆ ಮತ್ತು ಆರ್ಥಿಕ ಇಲಾಖೆಯ ಬೇರೆ ಬೇರೆ ವಿಭಾಗಗಳೊಂದಿಗೆ ಸಮಾಲೋಚಿಸಿ ತನ್ನ ಸಮಗ್ರ ಅಭಿಪ್ರಾಯವನ್ನು ತಿಳಿಸಬೇಕಾಗುತ್ತದೆ.

ಆದರೆ, ಕೆಲವು ಆಡಳಿತ ಇಲಾಖೆಗಳು ಕ್ಯಾಬಿನೆಟ್ ದಿನಾಂಕ ನಿಗದಿಯಾದ ನಂತರ ಕೇವಲ ಒಂದು ಅಥವಾ ಎರಡು ದಿನಗಳ ಮೊದಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆಗಳನ್ನು ಸಲ್ಲಿಸಿ ತುರ್ತಾಗಿ ಪರಿಶೀಲಿಸುವಂತೆ ಕೋರಲಾಗುತ್ತಿದೆ. ಇದರಿಂದ ಆರ್ಥಿಕ ಇಲಾಖೆಯು ಪ್ರಸ್ತಾವನೆಗಳನ್ನು ಎಲ್ಲಾ ಕೋನಗಳಿಂದ ಪರಿಶೀಲಿಸಿ ತನ್ನ ಅಭಿಪ್ರಾಯವನ್ನು ನೀಡಲು ಕಷ್ಟವಾಗುತ್ತಿದೆ.

ಆದ್ದರಿಂದ ಎಲ್ಲಾ ಆಡಳಿತ ಇಲಾಖೆಗಳು ಇನ್ನು ಮುಂದೆ ಕ್ಯಾಬಿನೆಟ್‌ಗೆ ಸಲ್ಲಿಸುವ ಪ್ರಕರಣಗಳಲ್ಲಿ ಆರ್ಥಿಕ ಇಲಾಖೆಯ ಅಭಿಪ್ರಾಯಕ್ಕಾಗಿ ಸಲ್ಲಿಸುವ ಕಡತಗಳನ್ನು ಕನಿಷ್ಠ ಒಂದು ವಾರ ಮುಂಚಿತವಾಗಿ ಸಲ್ಲಿಸಲು ತಿಳಿಸಿದೆ.

28/8/2023

(ಎಲ್.ಕೆ.ಅತೀಕ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಆರ್ಥಿಕ ಇಲಾಖೆ

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
2. ಆಯುಕ್ತರು, ಖಜಾನೆ ಆಯುಕ್ತಾಲಯ, ಅರಮನೆ ರಸ್ತೆ, ಬೆಂಗಳೂರು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು
4. ರಾಜ್ಯದ ಎಲ್ಲಾ ನಿಗಮ/ಮಂಡಳಿ/ಪ್ರಾಧಿಕಾರಗಳು.
5. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು.

6. ಆರ್ಥಿಕ ಇಲಾಖೆಯ ಅಪರ/ಜಂಟಿ/ಉಪ ಕಾರ್ಯದರ್ಶಿಗಳು.
7. ಶಾಖಾ ಕಡತ/ಹೆಚ್ಚುವರಿ ಪ್ರತಿಗಳು.